# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 395 (378) |
| **ಸದಸ್ಯರ ಹೆಸರು** | : | ಶ್ರೀ ಡಿ.ಟಿ. ಶ್ರೀನಿವಾಸ (ಡಿ.ಟಿ.ಎಸ್ )<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| **ಉತ್ತರಿಸ ಬೇಕಾದ ದಿನಾಂಕ** | : | 19.08.2026 |
| **ಉತ್ತರಿಸುವ ಸಚಿವರು** | : | ಇಂಧನ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ ಕೋಟೆ ವಾಣಿ ವಿಲಾಸ ಸಾಗರ, ಚಂದ್ರವಳ್ಳಿ ಹಾಗೂ ಜೋಗಿಮಟ್ಟಿ ಪ್ರದೇಶಗಳನ್ನು ಸಮಗ್ರ ಪ್ರವಾಸೋದ್ಯಮ ತಾಣಗಳನ್ನಾಗಿ ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇದಕ್ಕಾಗಿ ಇದುವರೆಗೆ ಎಷ್ಟು ಅನುದಾನ ಮಂಜೂರು ಮಾಡಿ ಎಷ್ಟು ಖರ್ಚು ಮಾಡಲಾಗಿದೆ; | ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ರಡಿ ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ ಕೋಟೆ, ವಾಣಿ ವಿಲಾಸ ಸಾಗರ, ಚಂದ್ರವಳ್ಳಿ ಹಾಗೂ ಜೋಗಿಮಟ್ಟಿ ಸ್ಥಳಗಳನ್ನು ಪ್ರವಾಸಿ ತಾಣಗಳನ್ನಾಗಿ ಗುರುತಿಸಲಾಗಿರುತ್ತದೆ.<br><br>ಸದರಿ ಪ್ರದೇಶಗಳನ್ನು ಪ್ರವಾಸಿ ತಾಣಗಳನ್ನಾಗಿ ಅಭಿವೃದ್ಧಿಪಡಿಸಲು ಕೈಗೊಂಡಿರುವ ಕಾಮಗಾರಿಗಳ ವಿವರ ಹಾಗೂ ಬಿಡುಗಡೆ ಮಾಡಿರುವ ಅನುದಾನದ ವಿವರವನ್ನು **ಅನುಬಂಧ-1** ರಲ್ಲಿ ಒದಗಿಸಲಾಗಿದೆ. |
| ಆ) | ತುಮಕೂರು ಜಿಲ್ಲೆಯ ದೇವರಾಯನದುರ್ಗ, ಸಿದ್ಧಗಂಗಾ ಕ್ಷೇತ್ರ ನಾಮದ ಚಿಲುಮೆ ಸೇರಿದಂತೆ ಜಿಲ್ಲೆಯ ಪ್ರಮುಖ ಪ್ರವಾಸಿ ತಾಣಗಳ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರ ರೂಪಿಸಿರುವ ಯೋಜನೆಗಳೇನು; | ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ರಡಿ ತುಮಕೂರು ಜಿಲ್ಲೆಯ ತುಮಕೂರು ತಾಲ್ಲೂಕಿನಲ್ಲಿ ದೇವರಾಯನದುರ್ಗ ಬೆಟ್ಟ, ಶ್ರೀ ಸಿದ್ಧಗಂಗಾ ಮಠ ಹಾಗೂ ನಾಮದ ಚಿಲುಮೆ ತಾಣಗಳನ್ನು ಪ್ರವಾಸಿ ತಾಣಗಳನ್ನಾಗಿ ಇಲಾಖೆಯಿಂದ ಗುರುತಿಸಲಾಗಿರುತ್ತದೆ.<br><br>**ದೇವರಾಯನದುರ್ಗ:**<br><br>2018-19ನೇ ಸಾಲಿನಲ್ಲಿ ಬಂಡವಾಳ ವೆಚ್ಚ ಯೋಜನೆಯ ಲೆಕ್ಕಶೀರ್ಷಿಕೆಯಡಿ ತುಮಕೂರು ಜಿಲ್ಲೆಯ, ತುಮಕೂರು ತಾಲ್ಲೂಕಿನಲ್ಲಿರುವ ದೇವರಾಯನದುರ್ಗ ಪ್ರವಾಸಿ ತಾಣದಲ್ಲಿ ಶ್ರೀ ಭೋಗಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದ ಹಿಂಭಾಗದಲ್ಲಿರುವ ಮಯೂರ ಮೇಘದೂತ ಕಟ್ಟಡವನ್ನು ಅಂದಾಜು ಮೊತ್ತ ರೂ.80.00ಲಕ್ಷಗಳಲ್ಲಿ ನವೀಕರಣ, ದುರಸ್ತಿ ಮತ್ತು ಫೆನ್ಸಿಂಗ್ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ.<br><br>ತುಮಕೂರು ಜಿಲ್ಲೆಯ, ತುಮಕೂರು ತಾಲ್ಲೂಕಿನಲ್ಲಿರುವ ದೇವರಾಯನದುರ್ಗ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿ ಪಡಿಸಲು ಹಾಗೂ ಪ್ರವಾಸಿಗರಿಗೆ ಮೂಲಭೂತ ಸೌಕರ್ಯವನ್ನು ಒದಗಿಸಲು ಸ್ವದೇಶ್ ದರ್ಶನ 2.0 ಯೋಜನೆ ಅಡಿಯಲ್ಲಿ ಅಂದಾಜು ಮೊತ್ತ ರೂ.4282.98 |

| | | |
|---|---|---|
| | | ಲಕ್ಷಗಳಿಗೆ ಯೋಜನಾ ವರದಿಯನ್ನು ಸಿದ್ಧಪಡಿಸಿ ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯಕ್ಕೆ ಸಲ್ಲಿಸಲಾಗಿದೆ.<br><br>**ಶ್ರೀ ಸಿದ್ಧಗಂಗಾ ಕ್ಷೇತ್ರ:** ತುಮಕೂರು ಜಿಲ್ಲೆಯ ಶ್ರೀ ಸಿದ್ಧಗಂಗಾ ಕ್ಷೇತ್ರದಲ್ಲಿ ಪ್ರವಾಸಿಗರ ಮೂಲಸೌಕರ್ಯ ಅಭಿವೃದ್ಧಿಪಡಿಸುವ ಪ್ರಸ್ತಾವನೆಯು ಇಲಾಖೆಯ ಮುಂದೆ ಇರುವುದಿಲ್ಲ.<br><br>**ನಾಮದ ಚಿಲುಮೆ:** ಈ ತಾಣವು ಅರಣ್ಯ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಸದರಿ ಪ್ರದೇಶಕ್ಕೆ ಮೂಲಭೂತ ಸೌಕರ್ಯ ಒದಗಿಸುವ ಪ್ರಸ್ತಾವನೆಯು ಪ್ರಸ್ತುತ ಇಲಾಖೆಯ ಮುಂದಿರುವುದಿಲ್ಲ.<br><br>ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ರಡಿ ಗುರುತಿಸಲಾಗಿರುವ ಪ್ರವಾಸಿ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲು ಮುಂದೆ ಬರುವ ಖಾಸಗೀ ಬಂಡವಾಳ ಹೂಡಿಕೆದಾರರಿಗೆ ಸಹಾಯಧನ, ರಿಯಾಯಿತಿ ಹಾಗೂ ಪ್ರೋತ್ಸಾಹಧನಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. |
| ಇ) | ಈ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯ ಮೂಲಕ ಸ್ಥಳೀಯ ಯುವಕರಿಗೆ ಉದ್ಯೋಗ ಮತ್ತು ಸ್ವಯಂ ಉದ್ಯೋಗಾವಕಾಶ ಕಲ್ಪಿಸಲು ಪ್ರವಾಸೋದ್ಯಮ ಇಲಾಖೆ ಯಾವ ಯೋಜನೆಗಳನ್ನು ಜಾರಿಗೊಳಿಸಿದೆ; | ಪ್ರವಾಸೋದ್ಯಮ ಅಭಿವೃದ್ಧಿಯ ಮೂಲಕ ಸ್ಥಳೀಯ ಯುವಕರಿಗೆ ಉದ್ಯೋಗ ಮತ್ತು ಸ್ವಯಂ ಉದ್ಯೋಗಾವಕಾಶ ಕಲ್ಪಿಸಲು ಇಲಾಖೆಯಿಂದ ಕೈಗೊಂಡಿರುವ ಕಾರ್ಯಕ್ರಮದ ವಿವರವನ್ನು **<u>ಅನುಬಂಧ-2</u>** ರಲ್ಲಿ ಒದಗಿಸಿದೆ. |
| ಈ) | ಗ್ರಾಮೀಣ ಹಾಗೂ ನೈಸರ್ಗಿಕ ಪ್ರವಾಸಿ ತಾಣಗಳ ಸುತ್ತಮುತ್ತ ಹೋಂಸ್ಟೇ, ಸ್ಥಳೀಯ ಆಹಾರ ಮತ್ತು ಕರಕುಶಲ ಉತ್ಪನ್ನಗಳ ಮಾರಾಟಕ್ಕೆ ಉತ್ತೇಜನ ನೀಡಲು ಸರ್ಕಾರ ನೀಡುತ್ತಿರುವ ಸೌಲಭ್ಯಗಳೇನು ಮತ್ತು ಅನುದಾನ ಎಷ್ಟು? | ಗ್ರಾಮೀಣ ಹಾಗೂ ನೈಸರ್ಗಿಕ ಪ್ರವಾಸಿ ತಾಣಗಳ ಸುತ್ತಮುತ್ತ ಹೋಂಸ್ಟೇ, ಸ್ಥಳೀಯ ಆಹಾರ ಮತ್ತು ಕರಕುಶಲ ಉತ್ಪನ್ನಗಳ ಮಾರಾಟಕ್ಕೆ ಸರ್ಕಾರವು ನೋಂದಣಿ ಸೌಲಭ್ಯ, ತರಬೇತಿ, ಪ್ರಚಾರ, ಮಾರುಕಟ್ಟೆ ಸಂಪರ್ಕ ಹಾಗೂ ಮೂಲಸೌಕರ್ಯ ಸಹಾಯವನ್ನು ಇಲಾಖೆಯಿಂದ ಒದಗಿಸಲಾಗುತ್ತಿದೆ. ಅರ್ಹ ಪ್ರವಾಸೋದ್ಯಮ ಯೋಜನೆಗಳಿಗೆ ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ರಡಿ ಬಂಡವಾಳ ಹೂಡಿಕೆಯ ಗರಿಷ್ಠ ಶೇ.25ರಷ್ಟು ಅಥವಾ ರೂ.10 ಕೋಟಿ, ಯಾವುದು ಕಡಿಮೆಯೋ ಅಷ್ಟು, ಸಹಾಯಧನ ನೀಡಲು ಅವಕಾಶವಿದೆ. ಹೋಂಸ್ಟೇಗಳಿಗೆ ಗೃಹಬಳಕೆಯ ದರದಲ್ಲಿ ವಿದ್ಯುತ್ ಮತ್ತು ನೀರಿನ ಸೌಲಭ್ಯವನ್ನು ಕಲ್ಪಿಸಲಾಗಿದೆ. |

**ಸಂಖ್ಯೆ:ಟಿಓಆರ್ 175 ಟಿಡಿವಿ 2026**

**(ಕೆ.ಜೆ. ಜಾರ್ಜ್)**
ಇಂಧನ ಹಾಗೂ ಪ್ರವಾಸೋದ್ಯಮ ಸಚಿವರು

**ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಡಿ.ಟಿ.ಶ್ರೀನಿವಾಸ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು ರವರ ಪ್ರಶ್ನೆ ಸಂಖ್ಯೆ 378 ಕ್ಕೆ**

**ಅನುಬಂಧ-1**

ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ರಡಿ ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ ಕೋಟೆ, ವಾಣಿವಿಲಾಸ ಸಾಗರ, ಚಂದ್ರವಳ್ಳಿ ಹಾಗೂ ಜೋಗಿಮಟ್ಟಿ ತಾಣಗಳನ್ನು ಪ್ರವಾಸಿ ತಾಣಗಳನ್ನಾಗಿ ಗುರುತಿಸಲಾಗಿರುತ್ತದೆ.

ಸದರಿ ಪ್ರದೇಶಗಳನ್ನು ಪ್ರವಾಸಿ ತಾಣಗಳನ್ನಾಗಿ ಅಭಿವೃದ್ಧಿಪಡಿಸಲು ಕೈಗೊಂಡಿರುವ ಕಾಮಗಾರಿಗಳ ವಿವರ ಹಾಗೂ ಬಿಡುಗಡೆ ಮಾಡಿರುವ ಅನುದಾನದ ವಿವರವನ್ನು ಈ ಕೆಳಗಿನಂತಿದೆ.

**ಚಿತ್ರದುರ್ಗ ಕೋಟೆ**:

- ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ ಕೋಟೆ ಮತ್ತು ಚಂದ್ರವಳ್ಳಿ ಪ್ರದೇಶಗಳನ್ನು ಸಮಗ್ರ ಪ್ರವಾಸೋದ್ಯಮ ತಾಣಗಳನ್ನಾಗಿ ಅಭಿವೃದ್ಧಿಪಡಿಸಲು CEPMIZ ಯೋಜನೆಯಡಿ ರೂ.28.73 ಕೋಟಿಗಳ ಅಂದಾಜು ವೆಚ್ಚದಲ್ಲಿ Landscape, Open Air Theatre, Light Show ಕಾಮಗಾರಿಯನ್ನು 05 ವರ್ಷಗಳ ನಿರ್ವಹಣಾ ವೆಚ್ಚವನ್ನು ಒಳಗೊಂಡಂತೆ ಮತ್ತು ಚಂದ್ರವಳ್ಳಿ ಕೆರೆಯಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು Fencing, Landscaping, Walking Track, Lighting and Sign Boards ಗಳನ್ನು ಒಳಗೊಂಡಂತೆ ಕಾಮಗಾರಿಗಳನ್ನು ಕೈಗೊಳ್ಳಲು ಸಮಗ್ರ ಯೋಜನಾ ವರದಿಯನ್ನು ಅನುಮೋದನೆಗಾಗಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಎಂ.ಇ.ಆರ್.ಸಿ ಬೆಂಗಳೂರು ರವರಿಗೆ ಸಲ್ಲಿಸಲಾಗಿರುತ್ತದೆ.

- 2018-19 ನೇ ಸಾಲಿನಲ್ಲಿ ಬಂಡವಾಳ ವೆಚ್ಚಗಳ ಯೋಜನೆಯಡಿಯಲ್ಲಿ ಚಿತ್ರದುರ್ಗ ಕೋಟೆ ಮುಂಭಾಗದಲ್ಲಿರುವ ಇಲಾಖೆ ಜಮೀನಿನಲ್ಲಿ ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಪ್ರವಾಸಿ ಮಾಹಿತಿ ಕೇಂದ್ರ, ಪಾರ್ಕಿಂಗ್ ಸೌಲಭ್ಯ, ಲಗೇಜ್ ಕೊಠಡಿ, ಕುಡಿಯುವ ನೀರಿನ ಸೌಲಭ್ಯ, ಹಾಗೂ ಪ್ರವಾಸಿಗರಿಗೆ ವಿಶ್ರಾಂತಿ ಸೌಲಭ್ಯಗಳನ್ನು ನಿರ್ಮಾಣ ಮಾಡಲಾಗಿದೆ. ದಿನಾಂಕ :30.07.2025 ರಂದು ಸದರಿ ಕಟ್ಟಡವನ್ನು ಮಾನ್ಯ ಶಾಸಕರು, ಚಿತ್ರದುರ್ಗ ವಿಧಾನಸಭಾ ಕ್ಷೇತ್ರರವರು ಉದ್ಘಾಟನೆಯನ್ನು ಮಾಡಿರುತ್ತಾರೆ. ಸದರಿ ಕಟ್ಟಡವನ್ನು ಈಗಾಗಲೇ ಕೆ.ಎಸ್.ಟಿ.ಡಿ.ಸಿ ಪ್ರಾಧಿಕಾರಕ್ಕೆ ಹಸ್ತಾಂತರಿಸಲಾಗಿದೆ. ಸದರಿ ಉಪಯೋಗವನ್ನು ಪ್ರವಾಸಿಗರು ಪಡೆದಿಕೊಳ್ಳುತ್ತಿದ್ದಾರೆ.

- 2018-19ನೇ ಸಾಲಿನಲ್ಲಿ ಬಂಡವಾಳ ವೆಚ್ಚಗಳ ಯೋಜನೆಯಡಿಯಲ್ಲಿ ಸಹಾಯಕ ನಿರ್ದೇಶಕರ ಕಛೇರಿ ಹಾಗೂ ಹೋಟೆಲ್ ಮಯೂರ ಕೆ.ಎಸ್.ಟಿ.ಡಿ.ಸಿ ಮುಂದೆ ರೂ.100.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೂಡು ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. (ಕೋಟೆಯ ಮುಂಭಾಗದಲ್ಲಿ)

- ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರವಾಸಿ ತಾಣಗಳನ್ನು ಅದರಲ್ಲಿ ಮುಖ್ಯವಾಗಿ ಚಿತ್ರದುರ್ಗ ಕೋಟೆಯನ್ನು ವೀಕ್ಷಿಸಲು ಪ್ರವಾಸಿಗರ ಅನೂಕೂಲಕ್ಕಾಗಿ ರಸ್ತೆ ಬದಿ ಪ್ರವಾಸಿ ಹೆದ್ದಾರಿ ಸೌಲಭ್ಯದಡಿಯಲ್ಲಿ (ಕುಟೀರ) ಯೋಜನೆಯಡಿ ಚಿತ್ರದುರ್ಗ ತಾಲ್ಲೂಕಿನ ಮಾರಘಟ್ಟ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಮೂಲಭೂತ ಸೌಲಭ್ಯಗಳನ್ನು ರೂ.833.28 ಲಕ್ಷಗಳಲ್ಲಿ ಕೈಗೊಳ್ಳಲಾಗಿದೆ. ಸದರಿ ಕಟ್ಟಡವನ್ನು ಈಗಾಗಲೇ ಕೆ.ಎಸ್.ಟಿ.ಡಿ.ಸಿ ಪ್ರಾಧಿಕಾರಕ್ಕೆ ದಿನಾಂಕ :28.05.2025 ರಂದು ಹಸ್ತಾಂತರಿಸಲಾಗಿದೆ.

- ಚಿತ್ರದುರ್ಗ ಕೋಟೆಯ ಪ್ರವಾಸಿ ತಾಣದಲ್ಲಿ ಕಲ್ಲಿನಲ್ಲಿ ಕೆತ್ತಿಸಿದ ಮಾಹಿತಿ ಬೋರ್ಡ್ ಅನ್ನು ಪ್ರವಾಸೋದ್ಯಮ ಇಲಾಖೆಯಿಂದ ಅಳವಡಿಸಲಾಗಿದೆ.

**ವಾಣಿವಿಲಾಸ ಸಾಗರ ಜಲಾಶಯ:**

ವಾಣಿವಿಲಾಸ ಸಾಗರ ಅಣೆಕಟ್ಟು ಪ್ರದೇಶದ ಬಳಿ ಪ್ರವಾಸಿ ಸೌಲಭ್ಯಗಳನ್ನು ರೂ.500.00 ಲಕ್ಷಗಳ ವೆಚ್ಚದಲ್ಲಿ ಕೈಗೊಳ್ಳಲಾಗಿದೆ. ವಿವರ ಈ ಕೆಳಕಂಡಂತಿದೆ.

**ಪ್ರಸ್ತುತ ಲಭ್ಯವಿರುವ ಸೌಲಭ್ಯಗಳು:**

1. ಮಕ್ಕಳ ಆಟದ ಮೈದಾನ ಮತ್ತು ಆಟಿಕೆಗಳನ್ನು ಅಳವಡಿಸುವ ಕಾಮಗಾರಿ (ಜೋನ್-2)
2. ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿ (ಜೋನ್-2)
3. ವಸ್ತ್ರ ಬದಲಾಯಿಸುವ ಕೊಠಡಿ ನಿರ್ಮಾಣ ಕಾಮಗಾರಿ (ಜೋನ್-2)
4. ಪೆನ್ಸಿಂಗ್ ಕಾಮಗಾರಿ (ಜೋನ್ -2)
5. ಸೋಪನಾ ಕಾಮಗಾರಿ (ಜೋನ್-2)
6. ಕಿಚನ್ ಕಟ್ಟಡ ನಿರ್ಮಾಣ ಕಾಮಗಾರಿ
7. ನೆಲಸಮತಟ್ಟು ಕಾಮಗಾರಿ
8. ಪ್ಯಾರಗೋಲಾ ನಿರ್ಮಾಣ ಕಾಮಗಾರಿ
9. ಆಲ್ ಪಾತವೇ ನಿರ್ಮಾಣ
10. ಟ್ರೀ ಪ್ಲಾಟ್ ಫಾರಂ ನಿರ್ಮಾಣ ಕಾಮಗಾರಿ.
11. ವಿದ್ಯುತ್ ಪೋಲ್ ಪ್ಲಾಟ್ ಪಾರಂ ಕಾಮಗಾರಿ
12. ರಿವಿಟ್ಮೆಂಟ್ ನಿರ್ಮಾಣ ಕಾಮಗಾರಿ
13. ಶಾಪಿಂಗ್ ಕಾಂಪ್ಲೇಕ್ಸ್ ನಿರ್ಮಾಣ ಕಾಮಗಾರಿ (3 ಬ್ಲಾಕ್ಸ್ )
14. ಶೌಚಾಲಯ ನಿರ್ಮಾಣ ಕಾಮಗಾರಿ
15. ಕಿಚನ್ ಫ್ರಂಟ್ ಪ್ರೊಟೆಕ್ಟಿಂಗ್ ವಾಲ್ ನಿರ್ಮಾಣ ಕಾಮಗಾರಿ
16. ಕಿಚನ್ ಫ್ರಂಟ್ ಪ್ರೊಟೆಕ್ಟಿಂಗ್ ವಾಲ್ ನಿರ್ಮಾಣ ಕಾಮಗಾರಿ (ಜೋನ್-1)
17. ವಿದ್ಯುತ್ ಪೋಲ್ ಶಿಫ್ಟಿಂಗ್ ಕಾಮಗಾರಿ
18. ಬೋರ್ ಕಾಮಗಾರಿ
19. ಆಲ್ ಅರೌಂಡ್ ಎಲೆಕ್ಟ್ರಿಕಲ್ ಕಾಮಗಾರಿ
20. ಎಂಟ್ರೆನ್ಸ್ ಆರ್ಚ್ ಮತ್ತು ವಿಂಗ್ವಾಲ್ ಗೇಟ್ ಮತ್ತು ಇನ್ನೊಂದು ಗೇಟ್ ಕಾಮಗಾರಿ
21. ಸಿ.ಸಿ .ಬೆಂಚ್ ಅಳವಡಿಸುವ ಕಾಮಗಾರಿ
22. ಟ್ಯಾಮಕ್ ವಾಟರ್ ಸಪ್ಲೈ ಹಾಗೂ ಕೇರ್ಟೇಕರ್ ಕಛೇರಿ ಕಾಮಗಾರಿ
23. ಲ್ಯಾಡ್ ಸ್ಕೇಪಿಂಗ್ ಕಾಮಗಾರಿ.

- ವಾಣಿವಿಲಾಸ ಸಾಗರ, ಪ್ರವಾಸಿ ತಾಣದಲ್ಲಿ ಕಲ್ಲಿನಲ್ಲಿ ಕೆತ್ತಿಸಿದ ಮಾಹಿತಿ ಬೋರ್ಡ್ ಗಳನ್ನು ಪ್ರವಾಸೋದ್ಯಮ ಇಲಾಖೆಯಿಂದ ಅಳವಡಿಸಲಾಗಿದೆ.

**<u>ಚಂದ್ರವಳ್ಳಿ:</u>**

- 2025 26 ನೇ ಸಾಲಿನ ಮಾನ್ಯ ಮುಖ್ಯ ಮಂತ್ರಿಗಳ ಆಯವ್ಯಯ ಘೋಷಣೆಯ ಕಂಡಿಕೆ ಸಂಖ್ಯೆ: 384ರಲ್ಲಿ ಚಿತ್ರದುರ್ಗ ಜಿಲ್ಲೆಯ ಚಂದ್ರವಳ್ಳಿ ಪ್ರವಾಸಿ ತಾಣವನ್ನು ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ಕೈಗೊಳ್ಳಲು ರೂ. ರೂ.5.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಪಡೆದಿದ್ದು, ತಾಂತ್ರಿಕ ಮಂಜೂರಾತಿ ಪಡೆಯುವ ಹಂತದಲ್ಲಿರುತ್ತದೆ. ಸದರಿ ಕಾಮಗಾರಿಗೆ ಪ್ರವಾಸೋದ್ಯಮ ಇಲಾಖೆಯಿಂದ ರೂ.71,42,857.00 ಗಳ ಮೊದಲನೇ ಕಂತಿನ ಅನುದಾನವಾಗಿ ಕೆ.ಟಿ.ಐ.ಎಲ್ ಸಂಸ್ಥೆಗೆ ಬಿಡುಗಡೆಯಾಗಿರುತ್ತದೆ.

- ಚಂದ್ರವಳ್ಳಿ 2015-16ನೇ ಸಾಲಿನಲ್ಲಿ ಬಂಡವಾಳ ವೆಚ್ಚಗಳ ಯೋಜನೆಯಡಿಯಲ್ಲಿಚಂದ್ರವಳ್ಳಿ ಪ್ರವಾಸಿ ತಾಣದಲ್ಲಿ ಪಾತ್-ವೇ, ಮೆಟ್ಟಿಲು ನಿರ್ಮಾಣ, ಸೈನೇಜ್ ಅಳವಡಿಕೆ, ಶೌಚಾಲಯ, ನಿರ್ಮಾಣ ನೀರಿನ ಸೌಲಭ್ಯ ಪರಗೋಲ ಕಾಮಗಾರಿಯನ್ನು ರೂ.56.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿರುತ್ತದೆ.

- ಚಂದ್ರವಳ್ಳಿ ಪ್ರವಾಸಿ ತಾಣದಲ್ಲಿ ಕಲ್ಲಿನಲ್ಲಿ ಕೆತ್ತಿಸಿದ ಮಾಹಿತಿ ಬೋರ್ಡ್ ಅನ್ನು ಪ್ರವಾಸೋದ್ಯಮ ಇಲಾಖೆಯಿಂದ ಅಳವಡಿಸಲಾಗಿದೆ.

**ಜೋಗಿಮಟ್ಟಿ:**

- ಜೋಗಿಮಟ್ಟಿ ಪ್ರವಾಸಿ ತಾಣವನ್ನು ಅಭಿವೃಧ್ಧಿಪಡಿಸಲು ಪ್ರವಾಸಿಗರ ಮೂಲಸೌಕರ್ಯ ಅಭಿವೃದ್ಧಿಪಡಿಸುವ ಪ್ರಸ್ತಾವನೆಯು ಇಲಾಖೆಯ ಮುಂದೆ ಇರುವುದಿಲ್ಲ.

- ಇದಲ್ಲದೇ, ಸದರಿ ಪ್ರದೇಶಗಳನ್ನು ಒಳಗೊಂಡಂತೆ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಪ್ರವಾಸೋದ್ಯಮ ನೀತಿ 2024-29ರಡಿ ಗುರುತಿಸಲಾಗಿರುವ ಪ್ರವಾಸಿ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲು ಮುಂದೆ ಬರುವ ಖಾಸಗೀ ಬಂಡವಾಳ ಹೂಡಿಕೆದಾರರಿಗೆ ಸಹಾಯಧನ, ರಿಯಾಯಿತಿ ಹಾಗೂ ಪ್ರೋತ್ಸಾಹಧನಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ.

********

**ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಡಿ.ಟಿ.ಶ್ರೀನಿವಾಸ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು ರವರ ಪ್ರಶ್ನೆ ಸಂಖ್ಯೆ 378ಕ್ಕೆ**

**ಅನುಬಂಧ-02**

**ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿಯಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯ ಮೂಲಕ ಸ್ಥಳೀಯ ಯುವಕರಿಗೆ ಉದ್ಯೋಗ ಮತ್ತು ಸ್ವಯಂ ಉದ್ಯೋಗವಕಾಶ ಕಲ್ಪಿಸಲು ಪ್ರವಾಸೋದ್ಯಮ ಇಲಾಖೆಯಿಂದ ಜಾರಿಗೊಳಿಸಿರುವ ಯೋಜನೆಯ ವಿವರಗಳು ಈ ಕೆಳಕಂಡಂತಿವೆ.**

- **2024-25ನೇ ಸಾಲಿನ ವಿದೇಶಿ ಭಾಷಾ ತರಬೇತಿ ಕಾರ್ಯಕ್ರಮ**: ಇಲಾಖೆಯಲ್ಲಿ ನೊಂದಾಯಿಸಲ್ಪಟ್ಟ ಪ್ರವಾಸಿ ಮಾರ್ಗದರ್ಶಿಗಳಿಗೆ ಪ್ರವಾಸಿಗರಿಗೆ ಪ್ರವಾಸೋದ್ಯಮವನ್ನು ಅಭಿವೃದ್ಧಿ ಹಾಗೂ ಪ್ರಚಾರ ಪಡಿಸುವ ಉದ್ದೇಶದಿಂದ ಚಿತ್ರದುರ್ಗ ಜಿಲ್ಲೆಯ ಪ್ರವಾಸಿ ತಾಣಗಳ ಐತಿಹಾಸಿಕ, ಧಾರ್ಮಿಕ, ಸಾಹಿತ್ಯ, ಸಾಂಸ್ಕೃತಿಕ ಹಾಗೂ ಕಲಾ ವೈವಿಧ್ಯತೆಗಳನ್ನು ಒಳಗೊಂಡ ಸೃಜನಶೀಲತೆಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ದೇಶ/ವಿದೇಶಿ ಪ್ರವಾಸಿಗರಿಗೆ ಮಾರ್ಗದರ್ಶನ ಮಾಡಲು ವಿದೇಶಿ ಭಾಷಾ ತರಬೇತಿ ನೀಡಲಾಗುತ್ತಿದೆ. ಸದರಿ ಮಾರ್ಗದರ್ಶಿಗಳು ಸ್ವಯಂ-ಉದ್ಯೋಗದ ಮುಖಾಂತರ ಕರ್ತವ್ಯವನ್ನು ನಿರ್ವಹಿಸುತ್ತಿದ್ದಾರೆ. ಇವರಿಗೆ ಪ್ರತಿ ತಿಂಗಳು ಪ್ರತಿಯೊಬ್ಬರಿಗೆ ರೂ.5,000/- ಗಳಂತೆ ಗೌರವಧನವನ್ನು ನೀಡಲಾಗುವುದು.

- **ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ**: 2024-25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ವಿವರಗಳು ಈ ಕೆಳಕಂಡಂತಿವೆ.

  - ➢ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಕೌಶ್ಯಲಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳಾದ Food Beverage Service Steward, Multi Cuisine Cook ಹಾಗೂ Room Attendant ತರಬೇತಿಯನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ Food Craft Institute (FCI), Mysore ಹಾಗೂ Institute of Hotel Management (IHM) ಬೆಂಗಳೂರು ರವರ ಮೂಲಕ ವಸತಿ ಸಹಿತ ತರಬೇತಿ ನೀಡಲಾಗುತ್ತಿದೆ.
  - ➢ ತರಬೇತಿ ಪಡೆದ ಅಭ್ಯರ್ಥಿಗಳು ಸದರಿ ಯೋಜನೆಯಿಂದ ಸ್ವಯಂ ಉದ್ಯೋಗ ಕಲ್ಪಿಸಿಕೊಳ್ಳಬಹುದಾಗಿದೆ.

- **ಮೊಬೈಲ್ ಕ್ಯಾಂಟೀನ್ ವಾಹನ ಖರೀದಿಸುವ ಯೋಜನೆ :**

  - ➢ 2024-25 ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ-11 & ಪರಿಶಿಷ್ಟ ಪಂಗಡ-13 ವರ್ಗದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ಖರೀದಿಸಲು ರೂ.5.00 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ.
  - ➢ 2025-26 ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ-06 & ಪರಿಶಿಷ್ಟ ಪಂಗಡ-04 ವರ್ಗದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ಖರೀದಿಸಲು ರೂ.5.00 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ.
  - ➢ ಸದರಿ ಯೋಜನೆಯಿಂದ ಸ್ವಯಂ ಉದ್ಯೋಗ ಕಲ್ಪಿಸಿಕೊಳ್ಳಬಹುದಾಗಿದೆ.

......2

ಉಪ ನಿರ್ದೇಶಕರು
ಪ್ರವಾಸೋದ್ಯಮ ಇಲಾಖೆ
ಬೆಂಗಳೂರು

**ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಯೋಜನೆಯಡಿಯಲ್ಲಿ ತುಮಕೂರು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯ ಮೂಲಕ ಸ್ಥಳೀಯ ಯುವಕರಿಗೆ ಉದ್ಯೋಗ ಮತ್ತು ಸ್ವಯಂ ಉದ್ಯೋಗವಕಾಶ ಕಲ್ಪಿಸಲು ಪ್ರವಾಸೋದ್ಯಮ ಇಲಾಖೆಯಿಂದ ಜಾರಿಗೊಳಿಸಿರುವ ಯೋಜನೆಯ ವಿವರಗಳು ಈ ಕೆಳಕಂಡಂತಿವೆ.**

- **ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ** : 2024-25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ವಿವರಗಳು ಈ ಕೆಳಕಂಡಂತಿವೆ.

  - ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಕೌಶ್ಯಲಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳಾದ Food Beverage Service Steward, Multi Cuisine Cook ಹಾಗೂ Room Attendant ತರಬೇತಿಯನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ Food Craft Institute (FCI), Mysore ಹಾಗೂ Institute of Hotel Management (IHM) ಬೆಂಗಳೂರು ರವರ ಮೂಲಕ ವಸತಿ ಸಹಿತ ತರಬೇತಿ ನೀಡಲಾಗುತ್ತಿದೆ.
  - ತರಬೇತಿ ಪಡೆದ ಅಭ್ಯರ್ಥಿಗಳು ಸದರಿ ಯೋಜನೆಯಿಂದ ಸ್ವಯಂ ಉದ್ಯೋಗ ಕಲ್ಪಿಸಿಕೊಳ್ಳಬಹುದಾಗಿದೆ.

- **ಮೊಬೈಲ್ ಕ್ಯಾಂಟೀನ್ ವಾಹನ ಖರೀದಿಸುವ ಯೋಜನೆ :**

  - 2024-25 ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ-07 & ಪರಿಶಿಷ್ಟ ಪಂಗಡ-07 ವರ್ಗದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ಖರೀದಿಸಲು ರೂ.5.00 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ.
  - 2025-26 ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ-09 & ಪರಿಶಿಷ್ಟ ಪಂಗಡ-06 ವರ್ಗದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ಖರೀದಿಸಲು ರೂ.5.00 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ.
  - ಸದರಿ ಯೋಜನೆಯಿಂದ ಸ್ವಯಂ ಉದ್ಯೋಗ ಕಲ್ಪಿಸಿಕೊಳ್ಳಬಹುದಾಗಿದೆ.

********

ಉಪ ನಿರ್ದೇಶಕರು
ಪ್ರವಾಸೋದ್ಯಮ ಇಲಾಖೆ
ಬೆಂಗಳೂರು